**ಕರ್ನಾಟಕ ಸರ್ಕಾರ**

ಸಂ:ಗ್ರಾಅಪ 27 ಗ್ರಾನೀಸ(4)2015

2ನೇ ಮಹಡಿ, 'E' Block,
K.H.B Complex,
ಕಾವೇರಿ ಭವನ, ಕೆ.ಜಿ.ರಸ್ತೆ,
ಬೆಂಗಳೂರು, ದಿನಾಂಕ:27.03.2015

**ಸುತ್ತೋಲೆ**

ವಿಷಯ: ಬರಪೀಡಿತ ತಾಲೂಕುಗಳ ಗ್ರಾಮೀಣ ಪ್ರದೇಶಗಳಲ್ಲಿನ ಸಮಸ್ಯಾತ್ಮಕ ಗ್ರಾಮಗಳಲ್ಲಿ ಕುಡಿಯುವ ನೀರಿನ ಕಾಮಗಾರಿಗಳನ್ನು ತೆಗೆದುಕೊಳ್ಳುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 117 ಗ್ರಾನೀಸ(4)2011, ದಿ:15.10.2011 ಮತ್ತು 24.02.2012
2. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 27 ಗ್ರಾನೀಸ(4)2015, ದಿನಾಂಕ:24.02.2015.
3. ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪ 45 ಗ್ರಾನೀಸ (2)2013, ದಿ:25.09.2013.

---

1. 2014-15ನೇ ಸಾಲಿನ ಬರಪೀಡಿತ ತಾಲೂಕುಗಳೆಂದು ಘೋಷಿಸಿರುವ 35 ತಾಲೂಕುಗಳಲ್ಲಿ ವಿಶೇಷವಾಗಿ ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು ಹಾಗೂ ಬೆಂಗಳೂರು (ಗ್ರಾ) ಜಿಲ್ಲೆಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ತೀವ್ರವಾಗಿದ್ದು, ಸುಮಾರು **1000-1200** ಅಡಿಗಳ ಆಳದವರೆಗೆ ಕೊಳವೆಬಾವಿಗಳನ್ನು ಕೊರೆಯಲಾಗುತ್ತಿದ್ದು, ಕೊಳವೆ ಬಾವಿ ಕೊರೆಯುವುದು, ಪಂಪು ಮೋಟಾರ್ ಅಳವಡಿಕೆ, ವಿದ್ಯುದ್ಧೀಕರಣ ಮತ್ತು ಪೈಪ್‌ಲೈನ್ ಕಾಮಗಾರಿಗಳು ಸೇರಿದಂತೆ ಘಟಕವಾರು ವೆಚ್ಚ ತೀವ್ರವಾಗಿ ಹೆಚ್ಚಾಗಿರುವುದು ಕಂಡುಬಂದಿದೆ. ಈ ಜಿಲ್ಲೆಗಳ ಬರಪೀಡಿತ ತಾಲೂಕುಗಳಲ್ಲಿ ತೀವ್ರತೆರನಾದ ಬರ ಪರಿಸ್ಥಿತಿ ತಲೆದೋರಿದ್ದು, ಬರಪೀಡಿತವೆಂದು ಘೋಷಣೆಯಾಗಿರುವುದರಿಂದ **ರೂ.5.00ಲಕ್ಷ** ವೆಚ್ಚದ ಕುಡಿಯುವ ನೀರಿನ ತುರ್ತು ಕಾಮಗಾರಿಗಳ ಅನುಷ್ಠಾನದ ಗರಿಷ್ಠ ವೆಚ್ಚದ ಮಿತಿಯನ್ನು **ರೂ.8.00ಲಕ್ಷಗಳಿಗೆ** ಹೆಚ್ಚಿಸುವ ಅನಿವಾರ್ಯತೆ ಕಂಡುಬಂದಿದೆ.

2. ಆದುದರಿಂದ ಈ 4 ಜಿಲ್ಲೆಗಳ ಬರಪೀಡಿತ ತಾಲೂಕುಗಳ ಗ್ರಾಮೀಣ ಪ್ರದೇಶಗಳಲ್ಲಿ 1000 ಅಡಿಗಳಿಗಿಂತ ಹೆಚ್ಚು ಆಳವಿರುವ ಅನುಮೋದಿತ **ರೂ.8.00ಲಕ್ಷ** ಮಿತಿಯೊಳಗಿನ ತುರ್ತು ಕುಡಿಯುವ ನೀರಿನ ಕಾಮಗಾರಿಗಳನ್ನು, ಸಾರ್ವಜನಿಕ ಹಿತಾಸಕ್ತಿಯ ಮೇರೆಗೆ ನೇರವಾಗಿ ಗ್ರಾಮೀಣ ನೀರು ಮತ್ತು ನೈರ್ಮಲ್ಯ ಇಲಾಖೆಯ ಇಂಜಿನಿಯರಿಂಗ್ ವಿಭಾಗಗಳ ಮುಖೇನ ಅನುಷ್ಠಾನಗೊಳಿಸಲು KTPP ಕಾಯ್ದೆಯ ಕಲಂ 4(a)ರಡಿ ವಿನಾಯತಿ ನೀಡಿ ಅನುಮತಿಸಲಾಗಿದೆ. ಈ ವಿನಾಯ್ತಿತಿಯು 31-07-2015 ರವರೆಗೆ ಜಾರಿಯಲ್ಲಿರುತ್ತದೆ. ತದನಂತರ NRDWP ಕ್ರಿಯಾ ಯೋಜನೆಯಡಿ ಅನುಮೋದನೆಯಾಗಿರುವ ಕಾಮಗಾರಿಗಳನ್ನು KTPP ಕಾಯ್ದೆ ನಿಯಮಗಳಂತೆಯೇ ಟೆಂಡರ್ ಮುಖೇನ ಅನುಷ್ಠಾನಗೊಳಿಸಬೇಕು. ಉಳಿದಂತೆ ಉಲ್ಲೇಖಿತ (3)ರ ಸುತ್ತೋಲೆಯಲ್ಲಿ ಹೇಳಿರುವ ಎಲ್ಲಾ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದೆಂದು ಸೂಚಿಸಿದೆ.

ಟಿಎಂವಿಜಯಭಾಸ್ಕರ್ 27/3/15
**(ಟಿ.ಎಂ.ವಿಜಯ್ ಭಾಸ್ಕರ್)**
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಇವರಿಗೆ:**
1. ಬೆಂಗಳೂರು (ಗ್ರಾ), ಕೋಲಾರ, ತುಮಕೂರು ಮತ್ತು ಚಿಕ್ಕಬಳ್ಳಾಪುರ ಜಿಲ್ಲಾ ಪಂಚಾಯತ್‌ಗಳ ಅಧ್ಯಕ್ಷರುಗಳು ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ಬೆಂಗಳೂರು (ಗ್ರಾ), ಕೋಲಾರ, ತುಮಕೂರು ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
3. ಮುಖ್ಯ ಇಂಜಿನಿಯರ್, ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆ, 1ನೇ ಮಹಡಿ, ಕೆಹೆಚ್‌ಬಿ ಕಾಂಪ್ಲೆಕ್ಸ್, ಕಾವೇರಿ ಭವನ, ಬೆಂಗಳೂರು-09.
4. ಬೆಂಗಳೂರು (ಗ್ರಾ), ಕೋಲಾರ, ತುಮಕೂರು ಮತ್ತು ಚಿಕ್ಕಬಳ್ಳಾಪುರ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಲೆಕ್ಕಾಧಿಕಾರಿಗಳು.

5. ರಾಜ್ಯದ ಎಲ್ಲಾ (4) ಅಧೀಕ್ಷಕ ಅಭಿಯಂತರರು, ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ವಿಭಾಗಗಳ ವೃತ್ತಗಳು.
6. ಬೆಂಗಳೂರು (ಗ್ರಾ), ಕೋಲಾರ, ತುಮಕೂರು ಮತ್ತು ಚಿಕ್ಕಬಳ್ಳಾಪುರ ಕಾರ್ಯಪಾಲಕ ಅಭಿಯಂತರರು, ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ವಿಭಾಗಗಳು.

**ಪ್ರತಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಸರ್ಕಾರದ ಕಾರ್ಯದರ್ಶಿಗಳು ಗ್ರಾಅಪಂ.ರಾಜ್ ಇಲಾಖೆಯ ಎಲ್ಲಾ ನಿರ್ದೇಶಕರುಗಳು, ಆಂತರಿಕ ಆರ್ಥಿಕ ಸಲಹೆಗಾರರು ಇವರುಗಳ ಆಪ್ತ ಕಾರ್ಯದರ್ಶಿಗಳು / ಆಪ್ತ ಸಹಾಯಕರುಗಳು.
4. ಸರ್ಕಾರದ ಕಾರ್ಯದರ್ಶಿ(DMC), ಕಂದಾಯ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು-1.
5. ಆಯುಕ್ತರು, ಹಾಗೂ ಪದನಿಮಿತ್ತ ಸರ್ಕಾರದ ಅಪರ ಕಾರ್ಯದರ್ಶಿಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 2ನೇ ಮಹಡಿ, ಕೆಹೆಚ್‌ಬಿ ಕಾಂಪ್ಲೆಕ್ಸ್, ಕಾವೇರಿ ಭವನ, ಬೆಂಗಳೂರು-09. ರವರ ಆಪ್ತ ಕಾರ್ಯದರ್ಶಿ
6. ನಿರ್ದೇಶಕರು, SIRD, ಗ್ರಾಅಪಂರಾಜ್ ಇಲಾಖೆ, ಮೈಸೂರು.
7. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ " ಕರ್ನಾಟಕ ವಿಕಾಸ" ಗ್ರಾಅಪಂರಾಜ್ ಇಲಾಖೆ, ಬೆಂಗಳೂರು.